# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್//157/2022-23 ದಿನಾಂಕ : 18-7-2022

ದಿನಾಂಕ: 16-07-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

ಉಪಸ್ಥಿತರು:

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ಪಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಶ್ರೀ.ಟಿ.ಆಂಜನೇಯ | ಹಿರಿಯ ಆರೋಗ್ಯ ಪರಿವೀಕ್ಷಕರು | 9880052188 |
| 10 | ಶ್ರೀ.ವಿಜಯ್ ಕುಮಾರ್.ಕೆ.ಆರ್ | ಕಿರಿಯ ಆರೋಗ್ಯ ಪರಿವೀಕ್ಷಕರು (ಪ್ರ) | 9738721476 |
| 11 | ಶ್ರೀ.ಎಸ್.ಹೇಮಂತ್ ಕುಮಾರ್ | ಸಹಾಯಕ ಅಭಿಯಂತರರು (ಬೆಸ್ಕಾಂ) | 9449870535 |
| 12 | ಶ್ರೀ. ಧನಂಜಯ | ಕಂದಾಯ ಪರಿವೀಕ್ಷಕರು | 7353149050 |
| 13 | ಶ್ರೀ. ಡಿ.ಸುರೇಶ್ | ಎ.ಎಸ್.ಐ ವಿ.ವಿ.ಪುರಂ | 9738272392 |
| 14 | ಶ್ರೀ. ಪ್ರವೀಣ್.ಸಿ. | ವಾರ್ಡ್ ಮಾರ್ಷಲ್ 143 | 7397141352 |

ದಿನಾಂಕ 16-07-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಪು.ತಿ.ನೋ

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ರಾಜು ರವರು ಮಾತನಾಡಿ ಈ ಕೆಳಕಂಡ ವಿಷಯಗಳನ್ನು ಸಭೆಯ ಗಮನಕ್ಕೆ ತಂದು ಸೂಕ್ತ ಕ್ರಮಕೈಗೊಳ್ಳುವಂತೆ ಕೋರಿದರು ಅವುಗಳೆಂದರೆ:-

1. ಸರ್ವೆಯರ್ ರಸ್ತೆಯ ಸ್ವತ್ತಿನ ಸಂಖ್ಯೆ: 77/I. ರಲ್ಲಿ ಸಿಂಬಿಯಾಸಿಸ್ ಬಿಲ್ಡರ್ಸ್ ಮತ್ತು ಡೆವಲಪರ್ಸ್ ರವರು ವಸತಿ ಸಂಕೀರ್ಣವನ್ನು ನಿರ್ಮಾಣ ಮಾಡುತ್ತಿದ್ದು ಯಾವುದೇ ನಡುಜಾಗಗಳನ್ನು ಬಿಡದೇ ಕಟ್ಟಡವನ್ನು ನಿರ್ಮಾಣ ಮಾಡುತ್ತಿರುವುದು ಕಂಡು ಬರುತ್ತಿರುವುದನ್ನು ಸ್ಥಳ ಪರಿಶೀಲಿಸಿ ಕ್ರಮ ವಹಿಸುವುದು.
2. ಎಂ.ಎನ್.ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದಲ್ಲಿ ವಾಹನಗಳು ಸಂಚರಿಸದಂತೆ ಬೊಲ್ಯಾರ್ಡ್ಸ್‌ಗಳನ್ನು ಅಳವಡಿಸಲಾಗಿದ್ದು ಇನ್ನು ಕೆಲವು ಸ್ಥಳಗಳಲ್ಲಿ ಅಳವಡಿಸದಿರುವುದರಿಂದ ವಾಹನ ಸವಾರರು ಪಾದಚಾರಿ ಮಾರ್ಗದಲ್ಲಿ ಸಂಚರಿಸುತ್ತಿರುವುದರಿಂದ ಇದನ್ನು ತಡೆಯುವ ಸಂಬಂಧ ಸೂಕ್ತ ಕ್ರಮವಹಿಸುವಂತೆ ಕೋರಿದರು.
3. ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂನವರು ಮರದ ಕೊಂಬೆಗಳನ್ನು ತೆರವುಗೊಳಿಸಿ ರಸ್ತೆಯಲ್ಲಿಯೇ ಬಿಟ್ಟಿರುವುದರಿಂದ ತೊಂದರೆಯಾಗುತ್ತಿದ್ದು ಕೂಡಲೇ ತೆರವುಗೊಳಿಸಲು ಕ್ರಮ ವಹಿಸುವಂತೆ ಕೋರಿದರು.
4. ಎಂ.ಎನ್. ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದ ಪಕ್ಕದಲ್ಲಿ ಗಿಡಗಳನ್ನು ನೆಟ್ಟು ಹಸಿರೀಕರಣ ಮಾಡಲು ಕರ್ಬ್‌ಗಳನ್ನು ಅಳವಡಿಸಿಕೊಡಬೇಕೆಂದು ಕೋರಿದರು.
5. ಬಸವನಗುಡಿ ವ್ಯಾಪ್ತಿಯ ರಸ್ತೆಗಳಲ್ಲಿ ಚರಂಡಿ ಅಭಿವೃದ್ಧಿ ಕಾಮಗಾರಿಯು ಪ್ರಗತಿಯಲ್ಲಿದ್ದು ಚರಂಡಿಯಿಂದ ತೆಗೆದು ಹಾಕಿರುವ ಸಿಲ್ಟನ್ನು ತೆರವುಗೊಳಿಸಬೇಕೆಂದು ಕೋರಿದರು.

ಈ ಎಲ್ಲಾ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಕ್ರಮ ಸಂಖ್ಯೆ 1, 3, 5 ಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ನೋಡಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ಸೂಚಿಸಿದರು. ಆಗ ವಾರ್ಡ್ ಅಭಿಯಂತರರು ಮಾತನಾಡುತ್ತ ಕಟ್ಟಡ ನಿರ್ಮಾಣಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಬಿಬಿಎಂಪಿ ಕಾಯ್ದೆ 313ರ ಅಡಿ ನೋಟೀಸ್‌ಯನ್ನು ಜಾರಿ ಮಾಡಲಾಗಿದ್ದು, ಉಳಿದ ವಿಷಯಗಳಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳು ಮಾತು ಮುಂದುವರೆಸಿ ಕ್ರಮ ಸಂಖ್ಯೆ(2)ಮತ್ತು (4) ಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳಲು ರಸ್ತೆ ಮೂಲಭೂತ ಸೌಕರ್ಯದ ಅಧಿಕಾರಿಗಳನ್ನು ಕೋರುವುದಾಗಿ ಸಭೆಗೆ ತಿಳಿಸಿದರು.

ನಂತರ ವಾರ್ಡ್ ಅಭಿಯಂತರರು ಮಾತನಾಡಿ ಬೆಸ್ಕಾಂ ವತಿಯಿಂದ ಹಳೆಯ ಟ್ರಾನ್ಸ್‌ಫಾರ್ಮರ್‌ಗಳನ್ನು ದುರಸ್ತಿ ಕಾರ್ಯ ನಡೆಯುತ್ತಿರುವುದರಿಂದ ಕಾಮಗಾರಿಗಳು ಮುಗಿದ ತಕ್ಷಣ ಸ್ಥಳಗಳಲ್ಲಿರುವ ಡೆಬ್ರೀಸ್ ಮತ್ತು ನಿರುಪಯುಕ್ತ ವಸ್ತುಗಳನ್ನು ತೆರವುಗೊಳಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಭಿಯಂತರರಿಗೆ ಸೂಚಿಸಿದರು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಟ್ರಾನ್ಸ್‌ಫಾರ್ಮರ್‌ಗಳ ಬದಲಾವಣೆಯ ಕಾಮಗಾರಿಯು ಮುಗಿದ ತಕ್ಷಣ ಸ್ಥಳಗಳಲ್ಲಿರುವ ನಿರುಪಯುಕ್ತ ವಸ್ತುಗಳನ್ನು ಕೂಡಲೇ ತೆರವುಗೊಳಿಸುವುದಾಗಿ ಸಭೆಗೆ ತಿಳಿಸಿದರು.

ಮು.ತಿ.ನೋ

ನಂತರ ವಾರ್ಡ್ ಅಭಿಯಂತರರು ಮಾತು ಮುಂದುವರೆಸಿ ಕಳೆದ ಸಭೆಗಳಲ್ಲಿ ಚರ್ಚಿಸಲಾಗಿದ್ದ ವಿಷಯವಾದ ಸಜ್ಜನ್‌ರಾವ್ ವೃತ್ತದ ಬಳಿ ಇರುವ ಐಲ್ಯಾಂಡ್‌ನಲ್ಲಿ ಪಾರಿವಾಳಗಳಿಗೆ ಹಾಗೂ ಇತರೆ ಪಕ್ಷಿಗಳಿಗೆ ಆಹಾರ ಧಾನ್ಯಗಳನ್ನು ಹಾಕುವುದನ್ನು ತಡೆಯುವ ಸಂಬಂಧ ಐಲ್ಯಾಂಡನ್ನು ತೆರವುಗೊಳಿಸುವಂತೆ ಕೋರಲಾಗಿದ್ದರಿಂದ ಸದರಿ ಐಲ್ಯಾಂಡ್‌ನ್ನು ತೆರವುಗೊಳಿಸಿರುವುದಾಗಿ ಸಭೆಯ ಗಮನಕ್ಕೆ ತಂದರು. ಆಗ ಸಭೆಯಲ್ಲಿದ್ದ ಕಲಾಸಿಪಾಳ್ಯ ಸಂಚಾರ ವಿಭಾಗದ ಎ.ಎಸ್.ಐ ಸುರೇಶ್ ರವರು ಸದರಿ ಸ್ಥಳದಲ್ಲಿ ಆಟೋ ನಿಲ್ದಾಣ ನಿರ್ಮಿಸುವಿರ ಎಂದು ಕೇಳಿದರು. ಆಗ ವಾರ್ಡ್ ಅಭಿಯಂತರರು ಈ ತರಹದ ಯಾವುದೇ ಪ್ರಸ್ತಾವನೆ ಇಲ್ಲವೆಂದು ಸಭೆಗ ತಿಳಿಸಿದರು.

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -143 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)